**ಕರ್ನಾಟಕ ಸರ್ಕಾರ**

**ಸಂಖ್ಯೆ:** ಡಿಟಿಇ 427 ಎಸಿಎಂ(2) 2016–17

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು–560 001,
ದಿನಾಂಕ: 05–06–2017.

**–:: ಸುತ್ತೋಲೆ ::–**

**ವಿಷಯ:** 2017–18ನೇ ಸಾಲಿನ ಎಸ್.ಎಸ್.ಎಲ್.ಸಿ ವಿದ್ಯಾರ್ಹತೆಗೆ ಅನುಗುಣವಾದ ಕೋರ್ಸ್‌ಗಳ ಪ್ರಥಮ ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ ಅರ್ಜಿಗಳನ್ನು ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಲು ಮತ್ತು ಸ್ವೀಕರಿಸುವ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

**ಉಲ್ಲೇಖ:**
1. ಈ ಕಛೇರಿ ಪ್ರವೇಶಾಧಿಸೂಚನೆ ಪತ್ರ ಸಂ. ಡಿಟಿಇ/427/ಎಸಿಎಂ(2)/2016–17, ದಿ:09–05–2017.
2. ಈ ಕಛೇರಿ ಸಮಸಂಖ್ಯೆ ಸುತ್ತೋಲೆ ದಿ:25–05–2017.

–00000000–

2017–18ನೇ ಸಾಲಿನ ಪ್ರಥಮ ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ ಉಲ್ಲೇಖ(2)ರ ಈ ಕಛೇರಿ ಸುತ್ತೋಲೆಯಲ್ಲಿ ಎಸ್.ಎಸ್.ಎಲ್.ಸಿ ಕೋರ್ಸ್‌ಗಳ ಪ್ರಥಮ ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ ಪ್ರವೇಶ ಅರ್ಜಿಗಳನ್ನು ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಲು ಹಾಗೂ ಸ್ವೀಕರಿಸುವ ಸಂಬಂಧ ಅಂತಿಮ ದಿನಾಂಕವನ್ನು 05–06–2017 ಎಂದು ನಿಗಧಿಪಡಿಸಿ ಸಂಬಂಧಪಟ್ಟ ರಾಜ್ಯದ 121 ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್‌ಗಳು "ಆನ್‌ಲೈನ್ ಅರ್ಜಿ ಸಲ್ಲಿಕೆ/ದಾಖಲಾತಿ ಪರಿಶೀಲನಾ ಕೇಂದ್ರ"ಗಳಲ್ಲಿ ಸಲ್ಲಿಸಲು ಸೂಚಿಸಲಾಗಿತ್ತು. ಪ್ರವೇಶ ಪ್ರಕ್ರಿಯೆಗಳ ವಿವಿಧ ಹಂತಗಳ ಪರೀಷ್ಕೃತ ವೇಳಾಪಟ್ಟಿಯನ್ನು ಸಹ ಪ್ರಕಟಿಸಲಾಗಿತ್ತು.

ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ಸಾರ್ವಜನಿಕರ ಹಿತದೃಷ್ಟಿಯ ಮೇರೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಲು ಹಾಗೂ ಭರ್ತಿ ಮಾಡಿದ ಅರ್ಜಿಯನ್ನು ಸ್ವೀಕರಿಸಲು ಈ ಕೆಳಕಂಡಂತೆ ದಿನಾಂಕವನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.

**ವೆಬ್‌ಸೈಟ್‌ನಿಂದ ಅರ್ಜಿಯನ್ನು ಪಡೆಯಲು, ಮೂಲ ದಾಖಲೆಗಳ ಪರಿಶೀಲನೆಯೊಂದಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ವಿಸ್ತರಿಸಲಾದ ದಿನಾಂಕ: 07–06–2017ರ ಸಂಜೆ 5:00 ಗಂಟೆಯವರೆಗೆ**

2017–18ನೇ ಸಾಲಿನ ಪ್ರವೇಶ ಪ್ರಕ್ರಿಯೆಗಳ ವಿವಿಧ ಹಂತಗಳ ಪರಿಷ್ಕೃತ ವೇಳಾಪಟ್ಟಿಯನ್ನು ಈ ಸುತ್ತೋಲೆಯಲ್ಲಿ ಲಗತ್ತಿಸಲಾಗಿದೆ. ಮೇಲೆ ನಮೂದಿಸಿರುವಂತೆ ಕೂಡಲೇ ಕ್ರಮ ತೆಗೆದುಕೊಂಡು ಈ ಬಗ್ಗೆ ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡಿ, ಅಭ್ಯರ್ಥಿಗಳ ಮತ್ತು ಪಾಲಕರ ಗಮನಕ್ಕೆ ತರುವುದು.

**ವಿ.ಸೂ:– ಪ್ರಥಮ ಡಿಪ್ಲೋಮಾ ಪ್ರವೇಶಾವಧಿಯನ್ನು ಪುನಃ ವಿಸ್ತರಿಸಲಾಗುವುದಿಲ್ಲ ಎಂಬ ಮಾಹಿತಿಯನ್ನು ವಿದ್ಯಾರ್ಥಿಗಳು ಹಾಗೂ ಪೋಷಕರುಗಳ ಗಮನಕ್ಕೆ ತರಲಾಗಿದೆ.**

5/6/17

**ನಿರ್ದೇಶಕರು**

05/06

ರಾಜ್ಯದ ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರಿಗೆ ಸೂಕ್ತ ಮಾಹಿತಿಗಾಗಿ ಹಾಗೂ ಅನುಸರಣೆಗಾಗಿ – ಸದರಿ ಸುತ್ತೋಲೆಯನ್ನು ಹಾಗೂ ಪರಿಷ್ಕೃತ ವೇಳಾಪಟ್ಟಿಯನ್ನು ಸೂಚನಾ ಫಲಕದಲ್ಲಿ ಪ್ರಕಟಿಸಿ ಹಾಗೂ ಸ್ಥಳೀಯ ದಿನಪತ್ರಿಕೆಯಲ್ಲಿ ಜಾಹಿರಾತು ನೀಡಲು ಸೂಚಿಸಲಾಗಿದೆ.

<u>ಪ್ರತಿ:</u>

1. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು – ಸದರಿ ಪರಿಷ್ಕೃತ ವೇಳಾಪಟ್ಟಿಯನ್ನು ಪ್ರಮುಖ ದಿನಪತ್ರಿಕೆಗಳಲ್ಲಿ ಹಾಗೂ ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಅಗತ್ಯ ಕ್ರಮಕ್ಕೆ.
2. ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
3. ಜಂಟಿ ನಿರ್ದೇಶಕರು(ಪ), ತಾಂತ್ರಿಕ ಪರೀಕ್ಷಾ ಮಂಡಳಿ
4. ಆಡಳಿತಾಧಿಕಾರಿ, ತಾಂತ್ರಿಕ ಶಿಕ್ಷಣ ಇಲಾಖೆ
5. ಪಿಆರ್‌ಓ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ
6. ಸಂಯೋಜನಾಧಿಕಾರಿಗಳು, ಇ–ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು – ಸದರಿ ಪತ್ರಿಕಾ ಪ್ರಕಟಣೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
7. ನಿರ್ದೇಶಕರ ಆಪ್ತಶಾಖೆಗೆ.